ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 05–10–2020

## ಮಾಧ್ಯಮ ಆಮಂತ್ರಣ

**ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿ ಒಂದು ವರ್ಷದ ಅವಧಿ ಪೂರೈಸಿರುವ ಕುರಿತು ಅಧ್ಯಕ್ಷ ಡಿ.ಎನ್. ಅರುಣ್ ಅವರಿಂದ ಪತ್ರಿಕಾಗೋಷ್ಠಿ**

ದಿನಾಂಕ : 06–10–2020. ಸಮಯ : ಅಪರಾಹ್ನ: 12.00 ಗಂಟೆಗೆ

ಸ್ಥಳ : ಹೋಟೆಲ್ ಚಾಲುಕ್ಯ, ನಂ: 44, ರೇಸ್‌ಕೋರ್ಸ್ ರಸ್ತೆ, 2ನೇ ಮಹಡಿ, ಬೆಂಗಳೂರು–01

## ಪತ್ರಿಕಾ ಪ್ರಕಟಣೆ

## ಮೊದಲನೇ ಸುತ್ತಿನ ಕಾಲು ಬಾಯಿ ರೋಗ ಲಸಿಕಾ ಕಾರ್ಯಕ್ರಮ

ಬೆಂಗಳೂರು, ಅಕ್ಟೋಬರ್ 05 (ಕರ್ನಾಟಕ ವಾರ್ತೆ) : ರಾಷ್ಟ್ರೀಯ ಜಾನುವಾರು ರೋಗಗಳ ನಿಯಂತ್ರಣ ಕಾರ್ಯಕ್ರಮದಡಿ ಮೊದಲನೇ ಸುತ್ತಿನ ಕಾಲು ಬಾಯಿರೋಗ ಲಸಿಕಾ ಕಾರ್ಯಕ್ರಮವನ್ನು ನವೆಂಬರ್ 15ರ ವರೆಗೆ ರಾಜ್ಯಾದ್ಯಂತ ನಡೆಸಲಿದ್ದು, ಒಟ್ಟು 6,303 ಲಸಿಕೆದಾರರು ಭಾಗವಹಿಸಲಿದ್ದಾರೆ. ಕಾಲು ಬಾಯಿ ರೋಗವು ಎತ್ತು, ಹೋರಿ, ಹಸು, ಎಮ್ಮೆ ಮಾರಕ ವೈರಾಣುವಿನಿಂದ ಉಂಟಾಗುವ ರೋಗವಾಗಿದ್ದು ಇದಕ್ಕೆ ನಿರ್ಧಿಷ್ಟ ಚಿಕಿತ್ಸೆ ಇಲ್ಲ. ಮುಂಜಾಗ್ರತಾ ಕ್ರಮವಾಗಿ ಲಸಿಕೆ ಹಾಕಿಸುವುದೊಂದೆ ರೋಗ ನಿಯಂತ್ರಣ ಹಾಗೂ ನಿರ್ಮೂಲನೆಗೆ ಪರಿಹಾರ.

ಜಾನುವಾರುಗಳಲ್ಲಿ ಪೂರ್ಣ ಪ್ರಮಾಣದ ರೋಗ ನಿರೋಧಕ ಶಕ್ತಿ ವೃದ್ಧಿಯಾಗಲು ಸತತವಾಗಿ ವರ್ಷದಲ್ಲಿ ಕನಿಷ್ಠ 2 ಬಾರಿ ಲಸಿಕೆ ಹಾಕಿಸಬೇಕು. ಲಸಿಕಾ ಅವಧಿಯಲ್ಲಿ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿ ರೈತರ ಮನೆಬಾಗಿಲಿಗೆ ಲಸಿಕೆ ಹಾಕುತ್ತಾರೆ. ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತೆ ಎಂದು ಪಶು ಪಾಲನೆ ಮತ್ತು ಪಶುವೈದ್ಯಕೀಯ ಸೇವೆಗಳ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹಧನ ಸಹಾಯಧನಕ್ಕೆ ಅರ್ಜಿ ಆಹ್ವಾನ

**ಬೆಂಗಳೂರು, ಅಕ್ಟೋಬರ್ 05 (ಕರ್ನಾಟಕ ವಾರ್ತೆ) :**

**ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯು 2020-21 ನೇ ಸಾಲಿಗೆ ಮಂಡಳಿಗೆ ವಂತಿಗೆ ಪಾವತಿಸುವ ವಿವಿಧ ಸಂಸ್ಥೆ/ಕಾರ್ಖಾನೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸಂಘಟಿತ ಕಾರ್ಮಿಕರ ಮಕ್ಕಳಿಂದ ಶೈಕ್ಷಣಿಕ ಪ್ರೋತ್ಸಾಹಧನ ಸಹಾಯಧನಕ್ಕೆ ಅರ್ಜಿ ಆಹ್ವಾನಿಸಿದೆ.**

**ಹಿಂದಿನ ಶೈಕ್ಷಣಿಕ ವರ್ಷದಲ್ಲಿ ಸಾಮಾನ್ಯ ವರ್ಗದ ವಿದ್ಯಾರ್ಥಿಗಳು ಶೇಕಡ 50 ರಷ್ಟು, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿದ ವಿದ್ಯಾರ್ಥಿಗಳು ಶೇಕಡ 45 ಅಂಕ ಪಡೆದು ತೇರ್ಗಡೆ ಹೊಂದಿರಬೇಕು. ಪ್ರೌಢಶಾಲೆ (8 ರಿಂದ 10 ನೇ ತರಗತಿ ವರೆಗೆ) ಪಿ.ಯು.ಸಿ. ಐ.ಟಿ.ಐ. ಡಿ.ಇಡಿ, ಡಿಪ್ಲೋಮೊ, ಪದವಿ, ಸ್ನಾತಕೋತ್ತರ ಪದವಿ, ಇಂಜಿನಿಯರಿಂಗ್ ಮತ್ತು ವೈದ್ಯಕೀಯ ಶಿಕ್ಷಣದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ತಂದೆ/ತಾಯಿ/ಪೋಷಕರ ಮಾಸಿಕ ಸಂಬಳ ರೂ. 15,000/- ಗಳಿಗೆ ಮೀರಿರಬಾರದು.**

**ಶೈಕ್ಷಣಿಕ ಪ್ರೋತ್ಸಾಹ ಧನ ಬಯಸುವ ವಿದ್ಯಾರ್ಥಿಗಳು ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯ ವೆಬ್‌ಸೈಟ್: www.klwb.karnataka.gov.in ನಲ್ಲಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕಾಗಿರುತ್ತದೆ. ಅರ್ಜಿ ಸಲ್ಲಿಸುವ ಪ್ರಾರಂಭ ದಿನಾಂಕ 01-10-2020. ಅಜಿ ಸಲ್ಲಿಸಲು ಕೊನೆಯ ದಿನಾಂಕ 15-12-2020 ಆಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ, ಕಾರ್ಮಿಕ ಕಲ್ಯಾಣ ಭವನ, ನಂ. 48, 2 ನೇ ಮಹಡಿ, ಮತ್ತೀಕೆರೆ ಮುಖ್ಯರಸ್ತೆ, ಯಶವಂತಪುರ, ಬೆಂಗಳೂರು -22 ದೂರವಾಣಿ ಸಂಖ್ಯೆ 080-23570266, 080-23570267 ನ್ನು ಸಂಪರ್ಕಿಸಲು ಅಧಿಕೃತ ಪ್ರಕಟಣೆ ತಿಳಿಸಿದೆ.**